ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 30/3/2021

# 10 ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ

ಬೆಂಗಳೂರು: ಬಳ್ಳಾರಿ ಮಹಾನಗರ ಪಾಲಿಕೆ ಸೇರಿ ರಾಜ್ಯದ 10 ನಗರ ಸ್ಥಳೀಯ ಸಂಸ್ಥೆಗಳ ಸಾರ್ವತ್ರಿಕ ಚುನಾವಣೆಗೆ ಮುಹೂರ್ತ ನಿಗದಿ ಪಡಿಸಿ ರಾಜ್ಯ ಚುನಾವಣಾ ಆಯೋಗ ವೇಳಾಪಟ್ಟಿ ಪ್ರಕಟಿಸಿದೆ.

ರಾಜ್ಯದ 1 ಮಹಾನಗರ ಪಾಲಿಕೆ, 5 ನಗರ ಸಭೆಗಳು, 2 ಪುರಸಭೆ ಮತ್ತು 2 ಪಟ್ಟಣ ಪಂಚಾಯಿತಿಗಳ 266 ವಾರ್ಡ್‌ಗಳಿಗೆ ಚುನಾವಣೆ ಘೋಷಣೆಯಾಗಿದ್ದು, ಏಪ್ರಿಲ್ 27ರಂದು. ಮತದಾನ ನಡೆಯಲಿದೆ. ತಕ್ಷಣದಿಂದ ನೀತಿ ಸಂಹಿತೆ ಜಾರಿಗೆ ಬರಲಿದ್ದು, ಅಂದರೆ, ಏ. 8ರಿಂದ 31ರವರೆಗೆ ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ಚುನಾವಣಾ ಆಯೋಗದ ಪ್ರಕಟಣೆ ತಿಳಿಸಿದೆ. ಚುನಾವಣೆಸಂಬಂಧಆಯಾಜಿಲ್ಲಾಧಿಕಾರಿಗಳು ಏ.8ರಂದು ಅಧಿಸೂಚನೆ ಹೊರಡಿಸಲಿದ್ದಾರೆ

ಬಳ್ಳಾರಿ ಮಹಾನಗರ ಪಾಲಿಕೆಯ 39, ಬೆಂಗಳೂರು ಗ್ರಾಮಾಂತರ ಜಿಲ್ಲೆ ವಿಯಪುರ ಪುರಸಭೆಯ 23, ರಾಮನಗರ ಜಿಲ್ಲೆ ರಾಮನಗರ ನಗರಸಭೆಯ 31, ಚನ್ನಪಟ್ಟಣ ನಗರಸಭೆಯ 31, ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ಪಟ್ಟಣ ಪಂಚಾಯಿತಿಯ 11, ಶಿವಮೊಗ್ಗ ಜಿಲ್ಲೆ ಭದ್ರಾವತಿ ನಗರಸಭೆಯ 35, ತೀರ್ಥಹಳ್ಳಿ ಪಟ್ಟಣ ಪಂಚಾಯಿತಿಯ 15, ಹಾಸನ ಜಿಲ್ಲೆ ಬೇಲೂರು ಪುರಸಭೆಯ 23, ಕೊಡಗು ಜಿಲ್ಲೆ ಮಡಿಕೇರಿ ನಗರಸಭೆಯ 23, ಬೀದರ್ ಜಿಲ್ಲೆ ಬೀದರ್ ನಗರಸಭೆಯ 35 ವಾರ್ಡ್‌ಗಳಿಗೆ ಚುನಾವಣೆ ನಡೆಯಲಿದೆ.

### ವೇಳಾಪಟ್ಟಿ

ಜಿಲ್ಲಾಧಿಕಾರಿಗಳಿಂದ ಅಧಿಸೂಚನೆ: ಏ.8
ನಾಮಪತ್ರ ಸಲ್ಲಿಸಲು ಕೊನೇ ದಿನಾಂಕ: ಏ.15
ನಾಮಪತ್ರ ಪರಿಶೀಲನೆ: ಏ.16
ನಾಮಪತ್ರ ವಾಪಸ್ ಪಡೆಯಲು: ಏ.19
ಮತದಾನ: ಏ.27 (ಬೆಳಗ್ಗೆ 7ರಿಂದ ಸಂಜೆ 5)
ಮತ ಎಣಿಕೆ: ಏ.30